ಇಲಾಖೆ / ವಿಷಯ : DEPARTMENT / SUBJECT: 13 ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 7/11/20

# ಪಂಚಾಯಿತಿ ಚುನಾವಣೆ ಮುಂದೂಡಿಕೆಗೆ ಸಲಹೆ

7-11-20

ಬೆಂಗಳೂರು: ಕೋವಿಡ್ ಕಾರಣದಿಂದಾಗಿ ಗ್ರಾಮ ಪಂಚಾಯಿತಿ ಚುನಾವಣೆಯನ್ನು ಮುಂದೂಡುವುದು ಸೂಕ್ತ ಎಂದು ಡಾ.ಎಂ.ಕೆ.ಸುದರ್ಶನ ನೇತೃತ್ವದ ತಜ್ಞರ ಸಮಿತಿ ಸರ್ಕಾರಕ್ಕೆ ವರದಿ ನೀಡಿದೆ.

ಈ ವರದಿಯಲ್ಲಿರುವ ಸಲಹೆಯನ್ನು ಮುಂದಿಟ್ಟುಕೊಂಡು ನ್ಯಾಯಾಲಯ ಮತ್ತು ಚುನಾವಣಾ ಆಯೋಗದ ಮನವೊಲಿಸಿ ಚುನಾವಣೆಯನ್ನು ಮುಂದೂಡಲು ಸರ್ಕಾರ ಚಿಂತನೆ ನಡೆಸಿದೆ ಎಂದು ಮೂಲಗಳು ತಿಳಿಸಿವೆ.

ಈಗ ಕೋವಿಡ್ ಸ್ವಲ್ಪ ಮಟ್ಟಿಗೆ ತಗ್ಗಿದ್ದರೂ ಜನ ಮತ್ತೆ ಒಟ್ಟಿಗೆ ಸೇರುವುದರಿಂದ ಸೋಂಕು ಹರಡುವ ಸಾಧ್ಯತೆ ಹೆಚ್ಚಾಗಿದೆ. ಇಂತಹ ಸಂದರ್ಭದಲ್ಲಿ ಚುನಾವಣೆ ನಡೆಸುವುದು ಅಪಾಯಕಾರಿ. ಕೆಲವು ತಿಂಗಳುಗಳ ಮಟ್ಟಿಗೆ ಮುಂದೂಡುವುದು ಸೂಕ್ತ ಎಂಬ ಸಲಹೆಯನ್ನೂ ನೀಡಿದೆ.

'ಪ್ರಚಾರದ ವೇಳೆ ಗುಂಪು ಗುಂಪಾಗಿಯೇ ಜನರು ಹೋಗುತ್ತಾರೆ. ಅಲ್ಲಿ ಸುರಕ್ಷತಾ ಕ್ರಮ ಅನುಸರಿಸುವ ಸಾಧ್ಯತೆ ತೀರಾ ಕಡಿಮೆ. ಇದರಿಂದ ಕೊರೊನಾ ವೈರಾಣು ಮನೆ ಮನೆಗೆ ತಲುಪಿದಂತಾಗುತ್ತದೆ' ಎಂಬ ಆತಂಕವನ್ನು ಸಮಿತಿ ವ್ಯಕ್ತಪಡಿಸಿದೆ.